**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.68/2019**

ಪಿ.ಡಬ್ಲ್ಯೂ: 2

ಸಿ.ಡಬ್ಲ್ಯೂ: 2

ಸಾಕ್ಷಿದಾರರ ಹೆಸರು : ರಂಗಪ್ಪ

ತಂದೆಯ ಹೆಸರು: : ಸಿದ್ದಪ್ಪ

ವಯಸ್ಸು : **65 ವರ್ಷ**

ಉದ್ಯೋಗ : ವ್ಯವಸಾಯ

ವಾಸಸ್ಥಳ : ಕೆಂಚಾಪುರ ಗ್ರಾಮ

**ದಿನಾಂಕ: 02-02-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕ: 05-08-2018 ರಂದು ಕೆಂಚಾಪುರ ಗೇಟ್ ಹತ್ತಿರ ಅಡಿಕೆ ಕಳ್ಳತನವಾದ ವಿಚಾರವಾಗಿ 1-00 ಗಂಟೆ ಸಮಯದಲ್ಲಿ ಪೊಲೀಸರು ಮಹಜರ್ ಮಾಡಿದ್ದು, ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ. ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುತ್ತದೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ನಿಪಿ-4 ಎಂದು, ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಒಂದು ಛಾಯಚಿತ್ರವನ್ನು ತೋರಿಸಲಾಗಿದ್ದು, ಅದರಲ್ಲಿ ತಮ್ಮ ಇರುವಿಕೆಯನ್ನುನೋಡಿ ಗುರುತಿಸಿದ್ದು, ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

**ಪಾಟೀ ಸವಾಲು : ಆರೋಪಿ ಪರ** ಶ್ರೀ ಎಎ **ವಕೀಲರಿಂದ.**

ಚಾಸಾ-1 ರವರು ನಮ್ಮ ಊರಿನವರು. ಚಾಸಾ-1 ನನಗೆ ಪರಿಚಯಸ್ಥರು. ಮಹಜರ್ ಮಾಡುವ ಮುಂಚೆ ಪೊಲೀಸರು ನನಗೆ ನೋಟಿಸನ್ನು ನೀಡಿರುವುದಿಲ್ಲ. ಮಹಜರ್ ಮಾಡಿದ ಸ್ಥಳದ ಚಕ್ಕುಬಂದಿ ಪಶ್ಚಿಮಕ್ಕೆ ರಸ್ತೆ, ಪೂರ್ವಕ್ಕೆ ಚಾನಲ್, ಉತ್ತರಕ್ಕೆ: ತೋಟ, ದಕ್ಷಿಣಕ್ಕೆ: ಚಾನಲ್ ಏರಿ ಬರುತ್ತದೆ. ಮಹಜರ್ ಗೆ ನನ್ನಜೊತೆ ನಾಗರಾಜ್ ಎಂಬುವವರು ಸಹಿ ಮಾಡಿರುತ್ತಾರೆ, ಇನ್ನಿತರರು ಯಾರು ಸಹಿ ಮಾಡಿರುತ್ತಾರೆಂದು ನನಗೆ ತಿಳಿದಿರುವುದಿಲ್ಲ. ಛಾಯಚಿತ್ರ ಯಾವ ದಿನದಂದು ತೆಗೆದಿರುತ್ತಾರೆಂದು ಅದರಲ್ಲಿ ನಮೂದು ಇರುವುದಿಲ್ಲ ಎಂದರೆ ಸಾಕ್ಷಿ ನನಗೆ ಗೊತ್ತಿರುವುದಿಲ್ಲ

ಎಂದು ನುಡಿದಿರುತ್ತಾರೆ. ಚಾಸಾ-1 ರವರಿಗೆ ಸಹಾಯ ಮಾಡುವ ಉದ್ದೇಶದಿಂದ ಪೊಲೀಸರು ಮಹಜರ್ ಮಾಡಿರುತ್ತಾರೆ ಹಾಗೂ ನಾನು ಅದಕ್ಕೆ ಮಹಜರ್ ಗೆ ಸಹಿ ಮಾಡಿರುತ್ತೇನೆಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಾ ಎಂದರೆ ಸರಿಯಲ್ಲ.

**ಮರುವಿಚಾರಣೆಃ** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

ಓ. ಕೇ. ಸ. ಇ. ಎ. ಒ.

ಸಹಿ/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**